ಶ್ರೀ ಡಿ.ಬಿ.ಚಂದ್ರೇಗೌಡ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : ಮಾನ್ಯ ಅಧ್ಯಕ್ಷರೆ, ಸಂಸದೀಯ ವ್ಯವಹಾರಗಳ ಸಚಿವರು ತಮ್ಮ ರೂಲಿಂಗ್‌ನ್ನು ಪ್ರಶ್ನೆ ಮಾಡಿದರೆಂದು ಮಾನ್ಯ ಸದಸ್ಯರೊಬ್ಬರು ಪ್ರಸ್ತಾಪ ಮಾಡಿರುವುದು ಈಗಾಗಲೇ ಕಡತಕ್ಕೆ ಹೋಗಿದೆ. ತಮ್ಮ ರೂಲಿಂಗ್‌ನ್ನು ನಾನು ಪ್ರಶ್ನೆ ಮಾಡಲಿಕ್ಕೆ ಹೋಗಲಿಲ್ಲ, ನಾನು ಏನು ಹೇಳಿದೆ ಎಂದರೆ ಈ ವಿಕೇಂದ್ರಿಕೃತ ವ್ಯವಸ್ಥೆಯ ತತ್ವಕ್ಕೆ ಇವರು ವಿರೋಧಿಯಾಗಿದ್ದಾರೆ ಹಾಗಾಗಿ ರಾಜ್ಯ ಸಭೆಯಲ್ಲಿ ಮಸೂದೆಯನ್ನು ಬೀಳಿಸಿದರು, ಜೊತೆಗೆ ಇವರಿಗೆ ಅವಕಾಶ ಕೊಟ್ಟಾಗ ಅದನ್ನು ಬಳಕೆ ಮಾಡಿಕೊಳ್ಳದೆ ಧರಣಿ ಕುಳಿತರು. ಈಗ ಚರ್ಚೆ ಮಾಡಬೇಕೆಂದು ಕೇಳುತ್ತಿದ್ದಾರೆ, ಇದು ಸರಿಯಾದುದಲ್ಲ ಎಂದು ಹೇಳಿದೆಯಷ್ಟೆ. ತಮ್ಮ ರೂಲಿಂಗ್‌ನ್ನು ಸಂಸದೀಯ ವ್ಯವಹಾರಗಳ ಸಚಿವರು ಪ್ರಶ್ನೆ ಮಾಡಿದರು ಎನ್ನತಕ್ಕಂತಹ ವಿಷಯ ಕಡತಕ್ಕೆ ಹೋಗಿದ್ದರೆ ಅದನ್ನು ಸರಿಪಡಿಸಬೇಕೆಂದು ತಮ್ಮಲ್ಲಿ ವಿನಂತಿಮಾಡಿಕೊಳ್ಳುತ್ತೇನೆ.

ಇ) ವಿಧೇಯಕ ಮಂಡನೆ

(ಗಿ)ಕರ್ನಾಟಕ ಪಂಚಾಯತ್ ರಾಜ್ (ಎರಡನೇ ತಿದ್ದುಪಡಿ) ವಿಧೇಯಕ,2000 ಮಂಡನೆ ಅನುಮತಿ ಕೋರಿಕೆ

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು): ಮಾನ್ಯ ಅಧ್ಯಕ್ಷರೆ, ಕರ್ನಾಟಕ ಪಂಚಾಯತ್ ರಾಜ್ (ಎರಡನೇ ತಿದ್ದುಪಡಿ) ವಿಧೇಯಕ 2000 ಸಭೆಯ ಮುಂದೆ ಮಂಡಿಸಲು ತಮ್ಮ ಅಮನುತಿ ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, ''ಕರ್ನಾಟಕ ಪಂಚಾಯತ್ ರಾಜ್ (ಎರಡನೇ ತಿದ್ದುಪಡಿ) ವಿಧೇಯಕ 2000 ಮಂಡಿಸಲು ಅನುಮತಿ ನೀಡುವುದು.''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಎಂ. ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು): ಮಾನ್ಯ ಅಧ್ಯಕ್ಷರೆ ಕರ್ನಾಟಕ ಪಂಚಾಯತ್ ರಾಜ್ (ಎರಡನೇ ತಿದ್ದುಪಡಿ) ವಿಧೇಯಕ 2000 ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ . ಅನುಬಂಧ (iv)

(ii) ಕರ್ನಾಟಕ ಮಾರಾಟ ತೆರಿಗೆ (ತಿದ್ದುಪಡಿ) ವಿಧೇಯಕ, 2000 ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಸ್.ಎಂ.ಕೃಷ್ಣ (ಮುಖ್ಯಮಂತ್ರಿಗಳು): ಮಾನ್ಯ ಅಧ್ಯಕ್ಷರೆ, ಕರ್ನಾಟಕ ಮಾರಾಟ ತೆರಿಗೆ (ತಿದ್ದುಪಡಿ) ವಿಧೇಯಕ 2000 ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ , ''ಕರ್ನಾಟಕ ಮಾರಾಟ ತೆರಿಗೆ (ತಿದ್ದುಪಡಿ) ವಿಧೇಯಕ 2000 ಮಂಡಿಸಲು ಅನುಮತಿ ನೀಡುವುದು.''